

# ಸರ್ದಾರ್ ಪಟೇಲ್ ದೇಶದ ಏಕತೆಗಾಗಿ ಶ್ರಮಿಸಿದ ಸೇನಾನಿ

ಮಹದೇಶ್ವರ ಕಾಲೇಜಿನಲ್ಲಿ ಸೋಮವಾರ ನಡೆದ ರಾಷ್ಟ್ರೀಯ ಏಕತಾ ದಿನಾಚರಣೆಯಲ್ಲಿ ಎನ್.ಎಸ್.ಎಸ್ ಅಧಿಕಾರಿ ಡಾ.ಆನಂದ್ ಪ್ರತಿಜ್ಞಾ ವಿಧಿ ಬೋಧಿಸಿದರು.ಪ್ರಾಂಶುಪಾಲೆ ಪ್ರೊ.ಬಿ.ಜಯಲಕ್ಷ್ಮಿ ಮೊದಲಾದವರಿದ್ದರು.

ಕೊಳ್ಳೇಗಾಲ: ದೇಶದ ಏಕತೆಗಾಗಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಅಪಾರವಾಗಿ ಶ್ರಮಿಸಿದ್ದಾರೆ ಎಂದು ಶ್ರೀ, ಮಹದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲೆ ಪ್ರೊ.ಬಿ.ಜಯಲಕ್ಷ್ಮಿ ಹೇಳಿದರು.

ಕಾಲೇಜಿನಲ್ಲಿ ಸೋಮವಾರ ರಾಷ್ಟ್ರೀಯ ಸೇವಾ ಯೋಜನೆ ಘಟಕದಿಂದ ಏರ್ಪಡಿಸಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 147 ನೇ ಜನ್ಮ ದಿನಾಚರಣೆ ಹಾಗೂ ರಾಷ್ಟ್ರೀಯ ಏಕತಾ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭಾರತದ ಉಕ್ಕಿನ ಮನುಷ್ಯ, ಭಾರತರತ್ನ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರು ದೇಶದ ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ, ರಾಜಕೀಯ ಧುರೀಣ ಹಾಗೂ ದೇಶದ ಮೊದಲ ಉಪಪ್ರಧಾನಿಯಾಗಿ ದೇಶದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಅವರ ಜೀವನ ಮತ್ತು ಸಾಧನೆಯ ಬಗ್ಗೆ ವಿದ್ಯಾರ್ಥಿಗಳು ತಿಳಿಯಬೇಕು ಎಂದರು.

ಎನ್.ಎಸ್.ಎಸ್ ಅಧಿಕಾರಿ ಪ್ರೊ.ನಂಜುಂಡಸ್ವಾಮಿ ಅವರು ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಜೀವನ, ಹೋರಾಟ ಮತ್ತು ಸಾಧನೆಗಳ ಬಗ್ಗೆ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಎಲ್.ಪ್ರೇಮಕುಮಾರಿ, ಇಂಗ್ಲಿಷ್ ವಿಭಾಗದ ಮುಖ್ಯಸ್ಥ ಎಸ್.ಹರೀಶ್ ಹಾಗೂ ವಿದ್ಯಾರ್ಥಿಗಳು ಇದ್ದರು.



On Dated:31-10-2022 Collaboration with National Service Scheme, University of Mysore, & NSS Cell, Youth Empowerment and Sports Department, Govt of Karnataka, Bangalore Organized National Unity Day Programme Under the Sardarvallabai Patel Birth Anniversary at UOM, NSS Units Colleges.

ತಮ್ಮ ನಂಬುಗೆಯ

ರಾ.ಸೇ.ಯೋ. ಕಾರ್ಯಕ್ರಮ ಸಂಯೋಜನಾಧಿಕಾರಿ

Programme Coordinator
National Service Scheme
NSS Bhavan
Sahukar Chennaiah Road
Opp. Saraswathipuram Police Station
Saraswathipuram, Mysuru-09